**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ**

**ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 174/2019**

ಚಾ.ಸಾ-04, ಪ್ರಾ.ಸಾ-02

| | | |
|---|---|---|
| ಹೆಸರು | : | ಉಷಾ |
| ಗಂಡನ ಹೆಸರು | : | ಯತೀಶ್ ಬಾಬು |
| ವಯಸ್ಸು | : | 52 |
| ವೃತ್ತಿ | : | ಆಶಾ ಕಾರ್ಯಕರ್ತೆ |
| ವಾಸ | : | ಕೊತ್ತೇಗಾಲ ಗ್ರಾಮ, ತಿ. ನರಸೀಪುರ ತಾಲ್ಲೂಕು. |

**ದಿನಾಂಕ 21.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಪ್ರಭಾರ ಎಪಿಪಿ ರವರಿಂದಃ**

ಪೊಲೀಸರು ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ ಮತ್ತು ಏನನ್ನೂ ಜಪ್ತಿಪಡಿಸಿಲ್ಲ. ನಾನು ಪೊಲೀಸರಿಗೆ ಹೇಳಿಕೆಯನ್ನು ನೀಡಿಲ್ಲ. ನನಗೆ ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ. ಆ ದಾಖಲೆಯು ಪಂಚನಾಮವಾಗಿದ್ದು, ಅದು ಈಗಾಗಲೇ ನಿಪಿ.2 ಎಂದು ಗುರುತಿಸಲ್ಪಟ್ಟಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಪ್ರಭಾರ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಪ್ರಭಾರ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

ಸಿಸಿ ಸಂಖ್ಯೆ: 174/2019

**ಪಾಟೀ ಸವಾಲುಃ ಮಾನ್ಯ ಪ್ರಭಾರ ಎಪಿಪಿ ರವರಿಂದಃ**

ದಿನಾಂಕ 31.03.2017 ರಂದು ಬೆಳಿಗ್ಗೆ 10.30 ರಿಂದ 11.30 ಗಂಟೆ ಸಮಯದಲ್ಲಿ ತಿ. ನರಸೀಪುರ ತಾಲ್ಲೂಕಿನ ಕೊತ್ತೇಗಾಲ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ 7ನೇ ತರಗತಿಯ ಕೊಠಡಿಯಲ್ಲಿ ಪೊಲೀಸರು ಪ್ರಾಸಾ-1 ರವರು ತೋರಿಸಿದಂತೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ನಿಪಿ.2 ರಂತೆ ಪಂಚನಾಮ ಜರುಗಿಸಿ, ಒಂದು ಅಂಗಿ, ಬನಿಯನ್ ಮತ್ತು ಬ್ಲೇಡ್‌ನ್ನು ಜಪ್ತಿಪಡಿಸಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 31.03.2017 ರಂದು ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ನಾನು ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)

ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದ. ತಿ.ನರಸೀಪುರ**